ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಕೃಷಿ ಹೊಂಡಗಳ ಅಕ್ರಮ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

258 (252) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ಹೊಂಡಗಳ ಅಕ್ರಮಗಳ ಕುರಿತು ತನಿಖೆ ನಡೆಸಿ, ವರದಿ ಸಲ್ಲಿಸಲು ಮಾನ್ಯ ಮುಖ್ಯಮಂತ್ರಿಗಳು ಆದೇಶಿಸಿದ ಬಳಿಕ ಅಕ್ರಮಗಳ ಕುರಿತ ವರದಿಯನ್ನು ಯಾವಾಗ ಸಲ್ಲಿಸಲಾಗಿದೆ;

(ಆ) ಕೃಷಿ ಹೊಂಡಗಳ ಅಕ್ರಮಗಳ ಕುರಿತು ವರದಿ ತಯಾರಿಸಲು ಯಾವ ಅಧಿಕಾರಿಯನ್ನು ನೇಮಿಸಲಾಗಿತ್ತು; ಎಷ್ಟು ಕೃಷಿ ಹೊಂಡಗಳ ನಿರ್ಮಾಣದಲ್ಲಿ ಅಕ್ರಮ ಪತ್ತೆಯಾಗಿದೆ; ಈ ಅಕ್ರಮಗಳಿಗೆ ಯಾವ ಅಧಿಕಾರಿಯನ್ನು ಹೊಣೆಗಾರರನ್ನಾಗಿ

ಮಾಡಲಾಗಿದೆ; ಕೃಷಿ ಹೊಂಡದಲ್ಲಿ ಅಕ್ರಮ ಎಸಗಿದ ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ;

(ಇ) 2018-19 ಮತ್ತು 2019-2020 ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ; ಕೃಷಿ ಹೊಂಡಗಳನ್ನು ನಿರ್ಮಿಸಿದ ಬಗ್ಗೆ ಅಧಿಕೃತ ವರದಿ ನೀಡುವ ಅಧಿಕಾರಿ ಯಾರು;

(ಈ) 2018-19 ಮತ್ತು 2019-2020 ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸಲು ಮಾಡಿರುವ ವೆಚ್ಚ ಎಷ್ಟು?